# All India Radio: Bangalore
# National Bulletin In Kannada
# 07.08.2026  19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಅಭಿವೃದ್ಧಿ ತಿದ್ದುಪಡಿ ಮಸೂದೆ-೨೦೨೬ಕ್ಕೆ ಸಂಸತ್ತು ಅಂಗೀಕಾರ

೨. ಭಯೋತ್ಪಾದನೆ ಮುಕ್ತ ವಾತಾವರಣದಲ್ಲಿ ಮಾತ್ರ ಪಾಕಿಸ್ತಾನದೊಂದಿಗಿನ ಸಂಬಂಧ ಮುಂದುವರಿಸಲು ಸಾಧ್ಯ - ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಪ್ರತಿಪಾದನೆ

೩. ನವೀನ, ಸುಸ್ಥಿರ ಶಿಕ್ಷಣ ವ್ಯವಸ್ಥೆ ನಿರ್ಮಿಸಲು ಬ್ರಿಕ್ಸ್ ರಾಷ್ಟ್ರಗಳ ನಡುವೆ ಸಹಕಾರಕ್ಕಾಗಿ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಕರೆ

೪. ಕೊರಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್; ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್‌ಗೆ ಭಾರತದ ರಕ್ಷಿತಾ ರಾಮ್‌ರಾಜ್, ಅಶ್ಮಿತಾ ಚೆಲಿಹಾ ಲಗ್ಗೆ

<>><><*><><<>

ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಅಭಿವೃದ್ಧಿ ತಿದ್ದುಪಡಿ ಮಸೂದೆ-೨೦೨೬ ಅನ್ನು ಸಂಸತ್ತು ಅಂಗೀಕರಿಸಿದೆ. ಲೋಕಸಭೆ ಇಂದು ಈ ಮಸೂದೆಯನ್ನು ಅನುಮೋದಿಸಿದ್ದು, ರಾಜ್ಯಸಭೆ ಸೋಮವಾರ ಮಸೂದೆಯನ್ನು ಅಂಗೀಕರಿಸಿತ್ತು. ಲೋಕಸಭೆಯಲ್ಲಿ ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೧೨ ಗಂಟೆಗೆ ಸದನ ಸೇರಿದಾಗ, ಕೇಂದ್ರ ಎಂಎಸ್‌ಎಂಇ ಸಚಿವ ಜಿತನ್ ರಾಮ್ ಮಾಂಝಿ, ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಅಭಿವೃದ್ಧಿ ಕಾಯ್ದೆ-೨೦೦೬ ಕ್ಕೆ ಮತ್ತಷ್ಟು ತಿದ್ದುಪಡಿ ತರುವ ಮಸೂದೆಯನ್ನು ಮಂಡಿಸಿದರು. ಮಸೂದೆಯು ಪಾವತಿ ವಿಳಂಬವನ್ನು ಪರಿಹರಿಸುವ ಮತ್ತು ವಿವಾದ ಪರಿಹಾರವನ್ನು ಸರಳಗೊಳಿಸುವ ಗುರಿಯನ್ನು ಹೊಂದಿದೆ. ಮಸೂದೆಯ ಪ್ರಕಾರ, ಪ್ರತಿಯೊಂದು ಕೇಂದ್ರ ಸಾರ್ವಜನಿಕ ವಲಯದ ಉದ್ಯಮವು ವ್ಯಾಪಾರ ಸ್ವೀಕಾರಾರ್ಹ ರಿಯಾಯಿತಿ ವ್ಯವಸ್ಥೆಯಲ್ಲಿ ಎಂಎಸ್‌ಎಂಇ ಗಳಿಂದ ಸರಕು ಅಥವಾ ಸೇವೆಗಳ ಖರೀದಿಗಾಗಿ ಎಲ್ಲಾ ಇನ್‌ವಾಯ್ಸ್‌ಗಳನ್ನು ಇತ್ಯರ್ಥಪಡಿಸಬೇಕು. ವಿವಾದದ ಸಂದರ್ಭದಲ್ಲಿ ಮಧ್ಯಸ್ಥಿಕೆ ವಿಫಲವಾದರೆ, ೩೦ ದಿನಗಳಲ್ಲಿ ಮಧ್ಯಸ್ಥಿಕೆಗೆ ಅರ್ಜಿ ಸಲ್ಲಿಸಬೇಕು. ಅರ್ಜಿಗಳು ಪೂರ್ಣಗೊಂಡ ದಿನಾಂಕದಿಂದ ೯೦ ದಿನಗಳಲ್ಲಿ ತೀರ್ಪು ನೀಡಬೇಕು. ಆರು ತಿಂಗಳಿಗಿಂತ ಹೆಚ್ಚು ಕಾಲ ಪ್ರಕರಣ ಬಾಕಿ ಇದ್ದರೆ, ನೀಡಲಾದ ಮೊತ್ತದ ಕನಿಷ್ಠ ೫೦ ಪ್ರತಿಶತವನ್ನು ಪೂರೈಕೆದಾರರಿಗೆ ಪಾವತಿಸಬೇಕು. ಮಸೂದೆ ಅಂಗೀಕರಿಸಿದ ನಂತರ, ಪೀಠಾಸೀನಾಧಿಕಾರಿ ದಿಲೀಪ್ ಸೈಕಿಯಾ ಅವರು ಸದನ ನಡೆಸಲು ಪ್ರಯತ್ನಿಸಿದರು. ಸದನ ಕಾರ್ಯನಿರ್ವಹಿಸಲು ಅನುಮತಿಸುವಂತೆ ಪ್ರತಿಭಟನಾನಿರತ ಸದಸ್ಯರಿಗೆ ಮನವಿ ಮಾಡಿದರು. ಪದೇ ಪದೆ ಪೋಸ್ಟರ್‌ಗಳು ಮತ್ತು ಬ್ಯಾನರ್‌ಗಳನ್ನು ತಂದು ಕಲಾಪಕ್ಕೆ ಅಡ್ಡಿಪಡಿಸುವುದು ಸರಿಯಲ್ಲ. ಇದು ಸದನದ ಕಾರ್ಯನಿರ್ವಹಣೆಗೆ ಅಡ್ಡಿಯಾಗುತ್ತದೆ ಎಂದು ಹೇಳಿದರು. ಗದ್ದಲ ಮುಂದುವರಿದಂತೆ, ಸೋಮವಾರ ಬೆಳಗ್ಗೆ ೧೧ ಗಂಟೆಗೆ ಸದನವನ್ನು ಮುಂದೂಡಿದರು. ಇದಕ್ಕೂ ಮೊದಲು, ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು, ಸ್ವಾತಂತ್ರ್ಯ ಹೋರಾಟಗಾರರು ಮತ್ತು ಕ್ವಿಟ್ ಇಂಡಿಯಾ ಚಳವಳಿಯ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಆಗಸ್ಟ್ ೯ ರಂದು ಕ್ವಿಟ್ ಇಂಡಿಯಾ ಚಳವಳಿಯ ೮೪ನೇ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದೆ ಎಂದು ಅವರು ಹೇಳಿದರು.

<>><><*><><<>

ಭಯೋತ್ಪಾದನೆ, ಹಗೆತನ ಮತ್ತು ಹಿಂಸಾಚಾರ ಮುಕ್ತ ವಾತಾವರಣದಲ್ಲಿ ಮಾತ್ರ ಭಾರತ, ಪಾಕಿಸ್ತಾನದೊಂದಿಗಿನ ಸಂಬಂಧ ಮುಂದುವರಿಸಲು ಸಾಧ್ಯ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆ ನೀತಿಯನ್ನು ಅನುಸರಿಸುತ್ತಿದೆ. ಭಾರತದ ವಿರುದ್ಧ ಭಯೋತ್ಪಾದನೆಯನ್ನು ರಾಜ್ಯ ನೀತಿಯ ಸಾಧನವಾಗಿ ಬಳಸುತ್ತಿದೆ ಎಂದು ದೂರಿದರು. ಪುಲ್ವಾಮ ಭಯೋತ್ಪಾದಕ ದಾಳಿಯ ನಂತರ ಪಾಕಿಸ್ತಾನಕ್ಕೆ ಅತ್ಯಂತ ಅನುಕೂಲಕರ ರಾಷ್ಟ್ರ ಸ್ಥಾನಮಾನವನ್ನು ಭಾರತ ಹಿಂತೆಗೆದುಕೊಂಡಿದೆ. ಪಾಕಿಸ್ತಾನದಿಂದ ಆಮದಾಗುವ ಅಥವಾ ರಫ್ತು ಮಾಡುವ ಎಲ್ಲ ಸರಕುಗಳ ಮೇಲಿನ ಕಸ್ಟಮ್ಸ್ ಸುಂಕವನ್ನು ಶೇಕಡಾ ೨೦೦ ಕ್ಕೆ ಹೆಚ್ಚಿಸಲಾಗಿದೆ ಎಂದು ಅವರು ತಿಳಿಸಿದರು. ಪುಲ್ವಾಮ ಭಯೋತ್ಪಾದಕ ದಾಳಿಯ ನಂತರ ಭಾರತ, ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದೆ, ಅಟ್ಟಾರಿ ಚೆಕ್‌ಪೋಸ್ಟ್ ಮುಚ್ಚಲಾಗಿದೆ, ವೀಸಾಗಳನ್ನು ನಿರ್ಬಂಧಿಸುವುದು ಸೇರಿದಂತೆ ಹಲವಾರು ರಾಜತಾಂತ್ರಿಕ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ಹೇಳಿದರು.

<>><><*><><<>

ಭಾರತೀಯ ರೈಲ್ವೆಯು ಪ್ರತಿವರ್ಷ ಸುಮಾರು ೫೮ ಕೋಟಿ ಊಟಗಳನ್ನು ಪೂರೈಸುತ್ತದೆ. ಆಹಾರ ಗುಣಮಟ್ಟಕ್ಕೆ ಸಂಬಂಧಿಸಿದಂತೆ ಸರಾಸರಿ ಶೇಕಡಾ ೦.೦೦೦೮ ರಷ್ಟು ಮಾತ್ರ ದೂರುಗಳು ದಾಖಲಾಗಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಕಳೆದ ಮೂರು ವರ್ಷಗಳಲ್ಲಿ ಈ ನಿಟ್ಟಿನಲ್ಲಿ ಐಆರ್‌ಸಿಟಿಸಿ ಸೂಕ್ತ ದಂಡಕ್ರಮಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದರು. ಈ ಕ್ರಮಗಳಲ್ಲಿ ಐದು ಕೋಟಿ ರೂಪಾಯಿಗೂ ಹೆಚ್ಚು ದಂಡ ವಿಧಿಸುವುದು, ಶೋಕಾಸ್ ನೋಟಿಸ್ ನೀಡುವುದು, ಒಪ್ಪಂದಗಳನ್ನು ರದ್ದುಗೊಳಿಸುವುದು, ಆಹಾರ ಗುಣಮಟ್ಟ ಮತ್ತು ನೈರ್ಮಲ್ಯದ ಉಲ್ಲಂಘನೆಗಾಗಿ ಪರವಾನಗಿದಾರರನ್ನು ವಜಾಗೊಳಿಸುವುದು ಸೇರಿವೆ ಎಂದು ಅವರು ಮಾಹಿತಿ ನೀಡಿದರು.

<>><><*><><<>

ನೀಟ್ ವಿಷಯದ ಕುರಿತು ವಿದ್ಯಾರ್ಥಿಗಳ ಪ್ರತಿಭಟನೆಯ ಸಮಯದಲ್ಲಿ ಪೊಲೀಸರಿಂದ ಬಲಪ್ರಯೋಗ ಸೇರಿದಂತೆ ಹಲವಾರು ವಿಷಯಗಳ ಕುರಿತು ಇಂದು ರಾಜ್ಯಸಭೆಯಲ್ಲಿ ಪ್ರತಿಪಕ್ಷಗಳಿಂದ ಗದ್ದಲ ಉಂಟಾದ ಕಾರಣ, ಕಲಾಪವನ್ನು ಸೋಮವಾರಕ್ಕೆ ಮುಂದೂಡಲಾಯಿತು. ಇಂದು ಬೆಳಗ್ಗೆ ಸದನ ಸೇರಿದಾಗ, ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಸ್ವಾತಂತ್ರ್ಯ ಹೋರಾಟಗಾರರು ಮತ್ತು ಕ್ವಿಟ್ ಇಂಡಿಯಾ ಚಳವಳಿಯ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಸ್ವಾತಂತ್ರ್ಯ ಹೋರಾಟಗಾರರು ಮತ್ತು ಹುತಾತ್ಮರ ಗೌರವಾರ್ಥವಾಗಿ ಸದನದಲ್ಲಿ ಮೌನ ಆಚರಿಸಲಾಯಿತು. ನಂತರ, ರಕ್ಷಣೆ, ಗೃಹ ವ್ಯವಹಾರಗಳು, ವಾಣಿಜ್ಯ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಇಲಾಖೆಗೆ ಸಂಬಂಧಿಸಿದ ಸಂಸದೀಯ ಸ್ಥಾಯಿ ಸಮಿತಿಯ ವರದಿಗಳನ್ನು ಸದನದಲ್ಲಿ ಮಂಡಿಸಲಾಯಿತು. ಬಳಿಕ ಪ್ರತಿಪಕ್ಷಗಳ ಗದ್ದಲದ ನಡುವೆ ಸಿ.ಪಿ.ರಾಧಾಕೃಷ್ಣನ್ ಅವರು, ಶೂನ್ಯ ವೇಳೆಯಲ್ಲಿ ಕಲಾಪ ನಡೆಸಿದರು. ಕೆಲವು ಸದಸ್ಯರು ತುರ್ತು ಮಹತ್ವದ ವಿಷಯಗಳನ್ನು ಪ್ರಸ್ತಾಪಿಸಿದರು. ಆದಾಗ್ಯೂ, ನಿರಂತರ ಘೋಷಣೆಗಳಿಂದಾಗಿ, ಸಭಾಪತಿಯವರು ಸದನವನ್ನು ಮೊದಲು ಮಧ್ಯಾಹ್ನದವರೆಗೆ ಮತ್ತು ನಂತರ ಸೋಮವಾರದವರೆಗೆ ಮುಂದೂಡಿದರು.

<>><><*><><<>

ವಿರೋಧ ಪಕ್ಷದ ಸದಸ್ಯರ ಅಡ್ಡಿಗಳ ನಡುವೆಯೂ ಸಂಸತ್ತಿನ ಎರಡೂ ಸದನಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಶಾಸಕಾಂಗ ವ್ಯವಹಾರಗಳು ನಡೆಯುತ್ತಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ಸಂಸತ್ತಿನ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭೆ ಇಂದು ಎಂಎಸ್‌ಎಂಇ ಮಸೂದೆಯನ್ನು ಅಂಗೀಕರಿಸಿದೆ. ಕಾಂಗ್ರೆಸ್ ಮತ್ತು ಇತರ ವಿರೋಧ ಪಕ್ಷಗಳ ಗದ್ದಲ ಮತ್ತು ಘೋಷಣೆ ಕೂಗುವಿಕೆಯಿಂದಾಗಿ ಎರಡೂ ಸದನಗಳಲ್ಲಿ ಚರ್ಚೆಗಳು ಸೀಮಿತವಾಗಿವೆ ಎಂದು ಹೇಳಿದರು. ವಿಶೇಷ ಅಧಿವೇಶನದ ಮೂಲಕ ಮಳೆಗಾಲದ ಅಧಿವೇಶನವನ್ನು ವಿಸ್ತರಿಸುವ ಯಾವುದೇ ಪ್ರಸ್ತಾಪವಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

<>><><*><><<>

ನವೀನ ಮತ್ತು ಸುಸ್ಥಿರ ಶಿಕ್ಷಣ ವ್ಯವಸ್ಥೆಗಳನ್ನು ನಿರ್ಮಿಸಲು ಬ್ರಿಕ್ಸ್ ರಾಷ್ಟ್ರಗಳ ನಡುವೆ ಬಲವಾದ ಸಹಕಾರಕ್ಕಾಗಿ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಕರೆ ನೀಡಿದ್ದಾರೆ. ಭುವನೇಶ್ವರದಲ್ಲಿ ಇಂದು ನಡೆದ ೧೩ ನೇ ಬ್ರಿಕ್ಸ್ ಶಿಕ್ಷಣ ಸಚಿವರ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಸಾಂಕ್ರಾಮಿಕ ರೋಗಗಳು, ಆರ್ಥಿಕ ಅನಿಶ್ಚಿತತೆಗಳು, ಹವಾಮಾನ ಬದಲಾವಣೆ ಮತ್ತು ತ್ವರಿತ ತಾಂತ್ರಿಕ ಪ್ರಗತಿಯಂತಹ ಜಾಗತಿಕ ಸವಾಲುಗಳಿಗೆ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ಶಿಕ್ಷಣ ವ್ಯವಸ್ಥೆ ಸಜ್ಜುಗೊಳ್ಳಬೇಕು ಎಂದು ಹೇಳಿದರು. ಭವಿಷ್ಯದ ಪೀಳಿಗೆಗಳು ಉದಯೋನ್ಮುಖ ಜಾಗತಿಕ ಸವಾಲುಗಳನ್ನು ಎದುರಿಸಲು ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆ ಅತ್ಯಗತ್ಯ ಎಂದು ಅವರು ಪ್ರತಿಪಾದಿಸಿದರು. ಬ್ರಿಕ್ಸ್ ರಾಷ್ಟ್ರಗಳ ವೈವಿಧ್ಯತೆಯು ಅದರ ಶ್ರೇಷ್ಠ ಸಾಮರ್ಥ್ಯಗಳಲ್ಲಿ ಒಂದಾಗಿದೆ. ಶಿಕ್ಷಣದಲ್ಲಿ ಜ್ಞಾನ, ಉತ್ತಮ ಅಭ್ಯಾಸಗಳು ಮತ್ತು ನವೀನ ವಿಧಾನಗಳನ್ನು ವಿನಿಮಯ ಮಾಡಿಕೊಳ್ಳಲು ಅಪಾರ ಅವಕಾಶಗಳನ್ನು ಒದಗಿಸುತ್ತದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

<>><><*><><<>

ಮೊದಲ ಜಾಗತಿಕ ದಕ್ಷಿಣ ಚಲಚಿತ್ರೋತ್ಸವ ಮುಂದಿನ ವರ್ಷ ಭಾರತದಲ್ಲಿ ನಡೆಯಲಿದೆ. ನ್ಯಾಷನಲ್ ಫಿಲ್ಮ್ ಡೆವಲೆಪ್‌ಮೆಂಟ್ ಕಾರ್ಪೊರೇಷನ್- ಎನ್‌ಎಫ್‌ಡಿಸಿ ಮತ್ತು ನ್ಯಾಷನಲ್ ಫಿಲ್ಮ್ ಆರ್ಕೈವ್ ಆಫ್ ಇಂಡಿಯಾ- ಎನ್‌ಎಫ್‌ಎಐ, ಬ್ರೆಜಿಲ್, ರಷ್ಯಾ, ವಿಯೆಟ್ನಾಂ ಸೇರಿದಂತೆ ಹಲವು ದೇಶಗಳೊಂದಿಗೆ ಪರಸ್ಪರ ಒಪ್ಪಂದ ಮತ್ತು ಮಾತುಕತೆಗಳನ್ನು ನಡೆಸಿ, ಭಾರತದಲ್ಲಿ ಜಾಗತಿಕ ಚಿತ್ರೋತ್ಸವ ನಡೆಸಲು ತೀರ್ಮಾನಿಸಿವೆ.

<>><><*><><<>

ಪ್ರಸ್ತಾವಿತ ವಿದೇಶಿ ಕೊಡುಗೆ ನಿಯಂತ್ರಣ ತಿದ್ದುಪಡೆ ವಿಧೇಯಕಕ್ಕೆ ವ್ಯಕ್ತವಾಗಿರುವ ಹಲವು ದೇಶಗಳ ಆಕ್ಷೇಪಣೆಗಳನ್ನು ಭಾರತ ತಳ್ಳಿಹಾಕಿದೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪ್ರಸ್ತಾವಿತ ವಿದೇಶಿ ಕೊಡುಗೆ ವಿಧೇಯಕ, ಭಾರತದ ಶಾಸನಾಂಗದ ತೀರ್ಮಾನಕ್ಕೆ ಸಂಬಂಧಪಟ್ಟಿದ್ದು, ದೇಶದ ಆಂತರಿಕ ವಿಷಯವಾಗಿದೆ ಎಂದು ಹೇಳಿದರು. ವಿದೇಶಿ ಬಂಡವಾಳವನ್ನು ಅಮೆರಿಕ ಸೇರಿದಂತೆ ಹಲವಾರು ದೇಶಗಳು ನಿಯಂತ್ರಿಸುತ್ತವೆ ಎಂದು ಜೈಸ್ವಾಲ್ ತಿಳಿಸಿದರು.

<>><><*><><<>

ಭಾರತದ ಶಟ್ಲರ್‌ಗಳಾದ ರಕ್ಷಿತಾ ರಾಮ್‌ರಾಜ್ ಮತ್ತು ಅಶ್ಮಿತಾ ಚೆಲಿಹಾ, ಅಸಾನ್‌ನಲ್ಲಿ ನಡೆಯುತ್ತಿರುವ ಕೊರಿಯಾ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳೆಯರ ಸಿಂಗಲ್ಸ್ ವಿಭಾಗದ ಸೆಮಿಫೈನಲ್ಸ್ ತಲುಪಿದ್ದಾರೆ. ರಕ್ಷಿತಾ, ಭಾರತದವರೇ ಆದ ತಾನ್ವಿ ಶರ್ಮಾ ವಿರುದ್ಧ ಜಯಿಸಿದರೆ, ಅಶ್ಮಿತಾ ಅಗ್ರ ಶ್ರೇಯಾಂಕದ ಹಿನಾ ಅಕೇಚಿ ಅವರಿಗೆ ಆಘಾತ ನೀಡಿ, ಸೆಮಿಫೈನಲ್ಸ್ ಪ್ರವೇಶಿಸಿದರು. ರಕ್ಷಿತಾ ಮತ್ತು ಅಶ್ಮಿತಾ ನಾಳೆ ಸೆಮಿಫೈನಲ್ಸ್‌ನಲ್ಲಿ ಮುಖಾಮುಖಿಯಾಗಲಿದ್ದಾರೆ.

**<><><*><><<>**

ಕೇರಳಂದ ಉತ್ತರ ಭಾಗದ ನಾಲ್ಕು ಜಿಲ್ಲೆಗಳಿಗೆ ಭಾರತೀಯ ಹವಾಮಾನ ಇಲಾಖೆಯು, ರೆಡ್ ಅಲರ್ಟ್ ಘೋಷಿಸಿದ್ದು, ಕೋಯಿಕೋಡ್, ಕಣ್ಣೂರು, ವಯನಾಡ್ ಮತ್ತು ಕಾಸರಗೋಡಿನಲ್ಲಿ ಅತಿ ಹೆಚ್ಚು ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಿದೆ. ಇತರೆ ಆರು ಜಿಲ್ಲೆಗಳಲ್ಲಿ ಹವಾಮಾನ ಇಲಾಖೆ ಯೆಲ್ಲೊ ಅಲರ್ಟ್ ಘೋಷಿಸಿದೆ.

**<><><*><><<>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೪೫೬ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೮ ಸಾವಿರದ ೪೯೯ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೬೫ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೫೭೧ ಅಂಕಗಳು ದಾಖಲಾಗಿದೆ.

**<><><*><><<>**

ಥೈಲ್ಯಾಂಡ್‌ನ ಬ್ಯಾಂಕಾಕ್‌ನ ವಾಯುವ್ಯದಲ್ಲಿರುವ ನೊಂಥಬುರಿ ಪ್ರಾಂತ್ಯದಲ್ಲಿ ೧೪ ವರ್ಷದ ವಿದ್ಯಾರ್ಥಿಯೊಬ್ಬ ಗುಂಡು ಹಾರಿಸಿ, ಏಳು ಜನರನ್ನು ಹತ್ಯೆ ಮಾಡಿದ್ದಾನೆ. ಘಟನೆಯಲ್ಲಿ ೨೩ ಜನರು ಗಾಯಗೊಂಡಿದ್ದು, ಈ ಪೈಕಿ ೧೦ ಜನರ ಸ್ಥಿತಿ ಗಂಭೀರವಾಗಿದೆ. ಸ್ಥಳೀಯ ಅಧಿಕಾರಿಗಳ ಪ್ರಕಾರ, ಗುಂಡು ಹಾರಿಸಿದ ವ್ಯಕ್ತಿ, ಆತ್ಮಹತ್ಯೆ ಮಾಡಿಕೊಳ್ಳುವ ಮೊದಲು, ದೇಬ್ಸಿರಿನ್ ನೊಂಥಬುರಿ ಪ್ರೌಢಶಾಲೆಯ ಐದು ಸಿಬ್ಬಂದಿಯನ್ನು ಹತ್ಯೆ ಮಾಡಿದ್ದಾನೆ. ಇದಕ್ಕೂ ಮುನ್ನ ಆತ ಮನೆಯಲ್ಲಿ ತನ್ನ ಇಬ್ಬರು ಅಜ್ಜಿಯರನ್ನು ಹತ್ಯೆ ಮಾಡಿದ್ದಾನೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**